**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ ಸಿ ಸಂಃ 95/2019**

| | | |
|---|---|---|
| ಸಾಕ್ಷಿಯ ಹೆಸರುಃ | ಶಿವರಾಜು | ಫ್ರಾಸಾಃಃ 1 |
| ತಂದೆ ಹೆಸರುಃ | ಗೋವಿಂದಯ್ಯ | ಚಾಸಾಃಃ 1 |
| ವಯಸ್ಸುಃ | 23 ವರ್ಷ | ಪ್ರಮಾಣೀಕರಿಸಿದ<br>ದಿಃ 02/01/2024 |
| ಉದ್ಯೋಗಃ | ಕೂಲಿ | |
| ವಾಸ ಸ್ಥಳಃ | ಮಾಕನಹಳ್ಳಿ ಗ್ರಾಮ,<br>ಪಿರಿಯಾಪಟ್ಟಣ ತಾಲ್ಲೂಕು. | |

**ಮುಖ್ಯ ವಿಚಾರಣೆಃ** ಮಾನ್ಯ **ಸಸಅ ರಿಂದಃ**

ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾರನ್ನೂ ದಸ್ತಗಿರಿ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಾನು ಯಾವುದೋ ಕೆಲಸದ ನಿಮಿತ್ತ ಪೊಲೀಸ್ ಠಾಣೆಗೆ ಹೋಗಿದ್ದಾಗ ಪೊಲೀಸರು ನನ್ನ ಸಹಿಯನ್ನು ಒಂದು ದಾಖಲೆಯ ಮೇಲೆ ಪಡೆದುಕೊಂಡಿರುತ್ತಾರೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯು ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರ್ ನ್ನು **ನಿ.ಪಿ.1** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.1(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಮಾಲುಪಟ್ಟಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಮಾಲುಪಟ್ಟಿಯನ್ನು **ನಿಪಿ.2** ಎಂದು, ಸಾಕ್ಷಿಯ ಸಹಿಯನ್ನು **ನಿಪಿ.2(ಎ)**ಎಂದು ಗುರುತಿಸಲಾಯಿತು. ಸಾಕ್ಷಿಯು ಮಾದರಿ ಸೀಲಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಮಾದರಿ ಸೀಲನ್ನು **ನಿಪಿ.3** ಎಂದು, ಸಾಕ್ಷಿಯ ಸಹಿಯನ್ನು **ನಿಪಿ.3(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಶೋಧನಾ ಸಮುಚಿತ ಆಧಾರದಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.4** ಎಂದು, ಅದರಲ್ಲಿರುವ ಸಾಕ್ಷಿಯ

ಸಹಿಯನ್ನು **ನಿ.ಪಿ.4(ಎ)** ಎಂದು ಗುರುತಿಸಲಾಯಿತು. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಸಅ ರವರಿಂದಃ**

ಈಗ ನನಗೆ ಓದಿ ಹೇಳಿದಂತೆ "ಸನ್ ಎರಡು ಸಾವಿರದ ಹದಿನೇಳನೆ ಇಸವಿ ಅಕ್ಟೋಬರ್ ಮಾಹೇ ತಾರೀಖು ಹದಿನೇಳರದು ........................... ಈ ಮಹಜರ್ ನ್ನು ಓದಿಸಿ ಕೇಳಿ ಸರಿಯಾಗಿದೆ ಎಂದು ಒಪ್ಪಿ ಈ ಕೆಳಗೆ ಸಹಿ ಮಾಡಿರುತ್ತೇವೆ." ಎಂದು ನಿಪಿ.1 ರಂತೆ ಮಹಜರ್ ಕ್ರಮ ಜರುಗಿಸಲಾಯಿತು ಎಂದರೆ ಸರಿಯಲ್ಲ. ಸದರಿ ಮಹಜರ್ ಗೆ ನಾನು ಸ್ಥಳದಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಈಗ ನನಗೆ ಓದಿ ಹೇಳಿದಂತೆ "ದಿನಾಂಕಃ17/10/2017 ರಂದು ........................... ಜಪ್ತುಪಡಿಸಿದ ಮುದ್ದೇಮಾಲನ್ನು ಗುರುತಿಸುತ್ತೇನೆ" ಎಂದು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು **ನಿಪಿ.5** ಎಂದು ಗುರುತಿಸಲಾಯಿತು. ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**
**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**ಹೆಿಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**